1. ವಿದ್ಯಾಪೀಠ, ಬಸವಕಲ್ಯಾಣ
2. ಸರ್ಕಾರಿ ಪ್ರೌಢಶಾಲೆ, ಗೋಟಾಲಾ
3. ಸರ್ಕಾರಿ ಪ್ರೌಢಶಾಲೆ, ಬಾಟಗೇರ

ಮೇಲೆ ತಿಳಿಸಿದ ಗ್ರಾಮ ಪಂಚಾಯತ್ ಮಟ್ಟದ ಪ್ರತಿ ಪೈಕಾ ಕೇಂದ್ರಗಳಿಗೆ ತಲಾ ರೂ. 1.00 ಲಕ್ಷ ಅನುದಾನವನ್ನು ಕ್ರೀಡಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಮಂಜೂರು ಮಾಡಲಾಗಿದ್ದು, ಇದರ ಪೈಕಿ ಶೇಕಡ 50ರಷ್ಟು ಅನುದಾನವನ್ನು 2008-09ರಲ್ಲೂ ಮತ್ತು ಉಳಿದ ಶೇಕಡ 50ರಷ್ಟು ಅನುದಾನವನ್ನು 2009-10ರಲ್ಲೂ ಬಿಡುಗಡೆಗೊಳಿಸಲಾಗಿದೆ.

ಆ) ಬಸವ ಕಲ್ಯಾಣ ತಾಲೂಕು ಕ್ರೀಡಾಂಗಣ ನಿರ್ಮಾಣ ಕಾಮಗಾರಿಗಾರಿ ರೂ. 70.00 ಲಕ್ಷಗಳನ್ನು ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ. ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ.

ಪೈಕಾ ಯೋಜನೆಯಡಿ ಗ್ರಾಮ ಪಂಚಾಯತ್ ಮಟ್ಟದ ಪೈಕಾ ಕೇಂದ್ರಗಳನ್ನು ಸ್ಥಾಪಿಸಲು ರೂ. 3.00 ಲಕ್ಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಇದಲ್ಲದೆ, ಪೈಕಾ ಅರ್ಜನಾ ಹಾಗೂ ಪೈಕಾ ಕಾರ್ಯಾಚರಣೆ ಅನುದಾನದ ಅಡಿಯಲ್ಲಿ ತಲಾ ಪೈಕಾ ಕೇಂದ್ರಕ್ಕೆ ರೂ. 20,000 ಸಾವಿರದಂತೆ ರೂ. 60 ಸಾವಿರ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಇ) ಕ್ರೀಡಾಂಗಣದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಪೈಕಾ ಯೋಜನೆ ಅಡಿ ಗ್ರಾಮ ಮಟ್ಟದ ಯುವಕರು ಹಾಗೂ ಕ್ರೀಡಾಪಟುಗಳು ನಿರ್ದಿಷ್ಟವಾಗಿ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಲು ಉತ್ತೇಜನ ನೀಡುವ ಸಲುವಾಗಿ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಶಿಕ್ಷಕರನ್ನು ಸಂಭಾವನೆ ಆಧಾರದ ಮೇಲೆ ನೇಮಿಸಿಕೊಂಡು ಅವರಿಗೆ ರಾಷ್ಟ್ರಮಟ್ಟದ ಕ್ರೀಡಾ ತರಬೇತಿ ನೀಡಿ ಅದರಿಂದ ಉಂಟಾದ ಪ್ರತಿಭೆಯನ್ನು ಗ್ರಾಮೀಣ ಯುವ ಜನರಿಗೆ ಕ್ರೀಡೆಗಳಲ್ಲಿ ತರಬೇತಿ ನೀಡಲು ಬಳಸಿಕೊಳ್ಳಲಾಗುತ್ತಿದೆ. ಕ್ರೀಡಾ ಸಾಮಗ್ರಿಗಳನ್ನು ಕೊಳ್ಳಲು ಪ್ರತಿ ಗ್ರಾಮಕ್ಕೂ ಹಣಕಾಸು ಸೌಲಭ್ಯ ಒದಗಿಸಲಾಗುತ್ತಿದೆ.

ಭಾಲ್ಕಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ವಿವರ

116 (184) ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತ ಕ್ಷೇತ್ರದಲ್ಲಿ ಕಳೆದ ಎರಡೂವರೆ ವರ್ಷಗಳಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ; (ಅಭಿವೃದ್ಧಿ ಕಾರ್ಯಗಳ ಪೂರ್ಣ ವಿವರಗಳನ್ನು ಮತ ಕ್ಷೇತ್ರವಾರು ಅಂಕಿ ಅಂಶಗಳಲ್ಲಿ ಒದಗಿಸುವುದು)

ಆ) ಈ ಅಭಿವೃದ್ಧಿ ಕಾರ್ಯಗಳಿಗಾಗಿ ಜಿಲ್ಲೆಗೆ ಇಲ್ಲಿಯವರೆವಿಗೆ ವೆಚ್ಚ ಮಾಡಲಾಗಿರುವ ಹಣವೆಷ್ಟು;

ಇ) ಈ ಪೈಕಿ ಎಷ್ಟು ಕಾಮಗಾರಿಗಳು ಪೂರ್ಣವಾಗಿದೆ ಮತ್ತು ಎಷ್ಟು ಅಪೂರ್ಣವಾಗಿವೆ;

ಈ) ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಹೊಸ ಕಾಮಗಾರಿಗಳನ್ನು ಇಲಾಖೆಯ ವತಿಯಿಂದ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ; ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; (ಮತ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು)?

ಶ್ರೀ ಜಿ. ಜನಾರ್ದನ ರೆಡ್ಡಿ ((ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯವನ್ನು ಕೈಗೊಂಡಿರುವುದಿಲ್ಲ.

ಆ) ಮೇಲ್ಕಂಡ ಉತ್ತರದೊಂದಿಗೆ ಉದ್ಭವಿಸುವುದಿಲ್ಲ.

ಇ) ಮೇಲ್ಕಂಡ ಉತ್ತರದೊಂದಿಗೆ ಉದ್ಭವಿಸುವುದಿಲ್ಲ.

ಈ) ಮೇಲ್ಕಂಡ ಉತ್ತರದೊಂದಿಗೆ ಉದ್ಭವಿಸುವುದಿಲ್ಲ.

ಬೀದರ್ ಜಿಲ್ಲೆಯಲ್ಲಿ ವಸತಿ ಯೋಜನೆಗಳ ಅನುಷ್ಠಾನ

117 (185) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿಯವರು ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ವಸತಿ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದಾರೆ; ಕಳೆದ ಎರಡೂವರೆ ವರ್ಷಗಳಲ್ಲಿ ಇದಕ್ಕಾಗಿ ವೆಚ್ಚ ಮಾಡಿರುವ ಹಣವೆಷ್ಟು; (ಮತಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

ಆ) ಜಿಲ್ಲೆಯಲ್ಲಿ ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ಯಾವ ಯಾವ ಸ್ಥಳಗಳಲ್ಲಿ ಎಷ್ಟೆಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಮತ್ತು